ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ಉಡುಪಿ ತಾಲ್ಲೂಕಿನಲ್ಲಿ ಮೇಲ್ದರ್ಜೆಗೇರಿಸಲು 3 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ

ಆ) ಉಡುಪಿ ವಿಧಾನ ಸಭಾಕ್ಷೇತ್ರದಲ್ಲಿ ಉದ್ಯವರ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ ಮತ್ತು ಬ್ರಹ್ಮಾವರ ವಿಧಾನಸಭಾ ಕ್ಷೇತ್ರದಿಂದ ಕಳ್ತೂರು, ಸಂತೆಕಟ್ಟಿ ಮತ್ತು ಬಾರ್ಕೂರು, ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳೂ ಮೇಲ್ದರ್ಜೇಗೇರಿಸಲು ಉದ್ದೇಶಿಸಲಾಗಿದೆ

594(706) ಶ್ರೀ ಜಯಪ್ರಕಾಶ್ ಹೆಗ್ಡೆ .ಕೆ (ಬ್ರಹ್ಮಾವರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ತಾಲ್ಲೂಕಿನಲ್ಲಿ ಮೇಲ್ದರ್ಜೆಗೇರಿಸಲು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿರುವವುಗಳ ಸ್ಥಳಗಳಾವುವು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಬಂದಿರುತ್ತದೆ

ಆ) ಕುಂದಾಪುರ ತಾಲ್ಲೂಕಿನ ಬೈಂದೂರು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಉಡುಪಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಬಂದಿರುತ್ತದೆ ಮಾರ್ಗಸೂಚಿ ಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

595(707) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರರ ಸಂಖ್ಯೆ ಪರಿಹಾರ ನಿಧಿಯಲ್ಲಿ ಬಾಕಿ ಇರುವ ಪ್ರಕರಣಗಳು ಎಷ್ಟು?

ಆ) 2004 ರಿಂದ ನೀಡಿರುವ ಪರಿಹಾರದ ವಿವರವನ್ನು ಕ್ಷೇತ್ರವಾರು ನೀಡುವುದು?

ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು)

ಅ) ಮೀನುಗಾರರ ಸಂಕಷ್ಟ ಪರಿಹಾರ ನಿಧಿಯಿಂದ ರಾಜ್ಯದ ಕರಾವಳಿ ಜಿಲ್ಲೆಗಳ 65 ವಿವಿಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಹಾರ ನೀಡಲು ಬಾಕಿ ಇದ್ದು, ಈಗಾಗಲೇ ದಿನಾಂಕ 02–02–2007ರಂದು ನಡೆದ ಸಂಕಷ್ಟ ಪರಿಹಾರ ನಿಧಿ ಸಮಿತಿ ಸಭೆಯಲ್ಲಿ ಬಾಕಿ ಇರುವ ಪ್ರಕರಣಗಳಿಗೆ ಸೂಕ್ತ ಪರಿಹಾರ ನೀಡಲು ನಿರ್ಧರಿಸಲಾಗಿದೆ

ಆ) 2004 ರಿಂದ ನೀಡಿರುವ ವಿಧಾನ ಸಭಾ ಕ್ಷೇತ್ರವಾರು ಪರಿಹಾರದ ಮೊತ್ತದ ವಿವರ ಕೆಳಕಂಡಂತಿದೆ –

ವಿಧಾನ ಸಭಾ ಕ್ಷೇತ್ರ	ಪ್ರಕರಣಗಳ ಸಂಖ್ಯೆ	ನೀಡಿರುವ ಪರಿಹಾರ
ಮಂಗಳೂರು	12	1,60,400
ಉಡುಪಿ	26	4,35,061
ಕಾಪು	22	2,51,003
ಬ್ರಹ್ಮಾವರ	13	1,96,500
ಕುಂದಾಪುರ	19	2,40,500
ಉಳ್ಳಾಲ	29	1,37,500
ಸುರತ್ಕಲ್	07	0,87,500
ಬೈಂದೂರು	23	2,43,942
ಮುಲ್ಕಿ ಮೂಡಬಿದ್ರೆ	03	0,30,000
ಕಾರವಾರ	14	1,67,088
ಅಂಕೋಲಾ	22	1,66,591
ಭಟ್ಕಳ	27	4,50,000
ಕುಮಟಾ	47	5,04,610
ಒಟ್ಟು	**264**	**30,70,695**